# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ

| | | |
|---|---|---|
| ಭಾಗ – ೪ಎ<br>Part – IVA | ಬೆಂಗಳೂರು, ಗುರುವಾರ, ೦೮, ಜನವರಿ, ೨೦೨೬(ಪುಷ್ಯ, ೧೮, ಶಕವರ್ಷ, ೧೯೪೭)<br>BENGALURU, THURSDAY, 08, JANUARY, 2026(PUSHYA , 18, SHAKAVARSHA, 1947) | ನಂ. ೨೯<br>No. 29 |


**ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ**

**ಅಧಿಸೂಚನೆ**

**ಸಂಖ್ಯೆ: ಸಂವ್ಯಶಾಇ 101 ಶಾಸನ 2025, ದಿನಾಂಕ:08.01.2026.**

ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ (ತಿದ್ದುಪಡಿ) ವಿಧೇಯಕ, 2025 ಇದಕ್ಕೆ 2026ರ ಜನವರಿ ತಿಂಗಳ 7ನೇ ದಿನಾಂಕದಂದು ರಾಜ್ಯಪಾಲರ ಅನುಮತಿ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2026 ರ ಕರ್ನಾಟಕ ಅಧಿನಿಯಮ ಸಂಖ್ಯೆ: 12 ಎಂಬುದಾಗಿ ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ-IVA) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

**2026 ರ ಕರ್ನಾಟಕ ಅಧಿನಿಯಮ ಸಂಖ್ಯೆ: 12**

(2026ರ ಜನವರಿ ತಿಂಗಳ 8ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ (ತಿದ್ದುಪಡಿ) ಅಧಿನಿಯಮ, 2025**

(2026 ರ ಜನವರಿ ತಿಂಗಳ 7ನೇ ದಿನಾಂಕದಂದು ರಾಜ್ಯಪಾಲರಿಂದ ಒಪ್ಪಿಗೆಯನ್ನು ಪಡೆಯಲಾಗಿದೆ)

ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ ಅಧಿನಿಯಮ, 2002ನ್ನು ತಿದ್ದುಪಡಿ ಮಾಡಲು ಒಂದು ಅಧಿನಿಯಮ;

ಇಲ್ಲಿ ಇನ್ನುಮುಂದೆ ಕಂಡು ಬರುವ ಉದ್ದೇಶಗಳಿಗಾಗಿ, ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ ಅಧಿನಿಯಮ, 2002 (2002ರ ಕರ್ನಾಟಕ ಅಧಿನಿಯಮ 20)ನ್ನು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು, ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪ್ರಕರಣ 3ರ ತಿದ್ದುಪಡಿ.-** ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ ಅಧಿನಿಯಮ, 2002 (2002ರ ಕರ್ನಾಟಕ ಅಧಿನಿಯಮ 20)ರ (ಇಲ್ಲಿ ಇನ್ನುಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 3ನೇ ಪ್ರಕರಣದ (2)ನೇ ಉಪಪ್ರಕರಣದ (ಬಿ) ಖಂಡದ ತರುವಾಯ, ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"(ಬಿ-1) ಮೇಲಿನದಕ್ಕೆ ಹೆಚ್ಚುವರಿಯಾಗಿ, ರಾಜ್ಯ ಸರ್ಕಾರವು ನಾಮನಿರ್ದೇಶಿಸಿದ, ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ಒಬ್ಬ ವ್ಯಕ್ತಿ:

(ಬಿ-1) ಮೇಲಿನದಕ್ಕೆ ಹೆಚ್ಚುವರಿಯಾಗಿ, ರಾಜ್ಯ ಸರ್ಕಾರವು ನಾಮನಿರ್ದೇಶಿಸುವ ಒಬ್ಬ ವ್ಯಕ್ತಿಯು ಮಹಿಳೆಯಾಗಿರತಕ್ಕದ್ದು."

**3. ಪ್ರಕರಣ 8ರ ತಿದ್ದುಪಡಿ.-** ಮೂಲ ಅಧಿನಿಯಮದ 8ನೇ ಪ್ರಕರಣದ (ಇ) ಖಂಡದ ತರುವಾಯ, ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"(ಎಫ್) ಸರ್ಕಾರದಿಂದ ಹೊಸ ದತ್ತಾಂಶ ಅಥವಾ ಮಾಹಿತಿಯನ್ನು ಸ್ವೀಕರಿಸಿದ ಮೇಲೆ ಅನುಸೂಚಿತ ಜಾತಿಗಳ ಸದಸ್ಯರಿಗೆ ಉಪ-ವರ್ಗೀಕರಣದ ಶೇಕಡವಾರು ಮೀಸಲಾತಿಯಲ್ಲಿ ಅಗತ್ಯ ಮಾರ್ಪಾಡನ್ನು ಮಾಡಲು ಸರ್ಕಾರಕ್ಕೆ ಶಿಫಾರಸ್ಸು ಮಾಡುವುದು".

**ಥಾವರ್‌ಚಂದ್ ಗೆಹ್ಲೋಟ್**
ಕರ್ನಾಟಕ ರಾಜ್ಯಪಾಲರು

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ.ಶ್ರೀಧರ್**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

## PARLIAMENTARY AFFAIRS AND LEGISLATION SECRETARIAT

## NOTIFICATION

**NO. DPAL 101 SHASANA 2025, BENGALURU, DATED: 08.01.2026**

ಭಾರತ ಸಂವಿಧಾನದ ಅನುಚ್ಛೇಧ 348ರ ಖಂಡ (3)ರ ಅಡಿಯಲ್ಲಿ ರಾಜ್ಯಪಾಲರಿಂದ ಅಧಿಕೃತಗೊಳಿಸಿದ ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ (ತಿದ್ದುಪಡಿ) ಅಧಿನಿಯಮ, 2025 (2026ರ ಕರ್ನಾಟಕ ಅಧಿನಿಯಮ ಸಂಖ್ಯೆ1:2( ನ ಭಾಷಾಂತರವನ್ನು ಅಧಿಕೃತ ಆಂಗ್ಲ ಪಠ್ಯವೆಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ-IVA) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

# KARNATAKA ACT NO. 12 OF 2026

(First Published in the Karnataka Gazette Extra-ordinary on the 08th Day of January 2026)

## THE KARNATAKA STATE COMMISSION FOR THE SCHEDULED CASTES AND THE SCHEDULED TRIBES (AMENDMENT) ACT, 2025

(Received the assent of the Governor on the 07th day of January, 2026)

An Act to amend the Karnataka State Commission for the Scheduled Castes and the Scheduled Tribes Act, 2002.

Whereas it is expedient to amend the Karnataka State Commission for the Scheduled Castes and the Scheduled Tribes Act, 2002 (Karnataka Act 20 of 2002) for the purposes hereinafter appearing;

Be it enacted by Karnataka State Legislature in the seventy sixth year of the Republic of India as follows:-

**1. Short title and Commencement.-** (1) This Act may be called the Karnataka State Commission for the Scheduled Castes and the Scheduled Tribes (Amendment) Act, 2025.

(2) It shall come into force on such date as the State Government may, by notification in the Official Gazette appoint.

**2. Amendment of section 3.-** In the Karnataka State Commission for the Scheduled Castes and the Scheduled Tribes Act, 2002 (Karnataka Act 20 of 2002) (hereinafter referred to as the Principal Act), in section 3, in sub-section (2), after clause (b), the following shall be inserted, namely:-

"(b-1) In addition to the above, one person who shall belong to the Scheduled Tribes to be nominated by the State Government;

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



(b-2) In addition to the above, one person who shall be a woman to be nominated by the State Government."

**3. Amendment of section 8.-** In the principal Act, in section 8, after clause (e), the following shall be inserted, namely:-

"(f) to recommend to the Government, the necessary modification in the reservation percentage of sub-classification to the members of the Scheduled Castes on receipt of new data or information from the Government".

The above translation of ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ (ತಿದ್ದುಪಡಿ) ಅಧಿನಿಯಮ, 2025 (2026 ರ ಕರ್ನಾಟಕ ಅಧಿನಿಯಮ ಸಂಖ್ಯೆ: 12) be published in the official Gazette under clause (3) of Article 348 of the Constitution of India.

**THAAWARCHAND GEHLOT**
**GOVERNOR OF KARANATAKA**

By Order and in the name of
the Governor of Karnataka,

**G. SRIDHAR**
Secretary to Government
Department of Parliamentary
Affairs and Legislation

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು
THAMMAIAH